downloaded from: www.kpscvaani.com

ಕರ್ನಾಟಕ ಸರ್ಕಾರ

ಉಪ ನಿರ್ದೇಶಕರವರ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
ಬೆಂಗಳೂರು ನಗರ ಜಿಲ್ಲೆ, ಸುಧಾರಣಾ ಸಂಸ್ಥೆಗಳ ಸಂಕೀರ್ಣ, ಡಾ:ಎಂ.ಹೆಚ್.ಮರಿಗೌಡ ರಸ್ತೆ, ಬೆಂಗಳೂರು-560029
email. dwcd.dd@gmail.com Phone No.080-26578688

ಸಂಖ್ಯೆ:ಉಪನಿಬೆಂನ:ಐಸಿಡಿಎಸ್:ಸಿಆರ್:37:2019-2020 ದಿನಾಂಕ:24-01-2020

ಪ್ರಕಟಣೆ

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು ನಗರ ಜಿಲ್ಲೆಯ ಶಿಶು ಅಭಿವೃದ್ಧಿ ಯೋಜನೆ, ಬೆಂಗಳೂರು ಉತ್ತರ-1, ಬೆಂಗಳೂರು ಉತ್ತರ-2, ಬೆಂಗಳೂರು ಕೇಂದ್ರ, ಬೆಂಗಳೂರು ದಕ್ಷಿಣ, ಬೆಂಗಳೂರು ರಾಜ್ಯ ಹಾಗೂ ಆನೇಕಲ್ ತಾಲ್ಲೂಕುಗಳ ವ್ಯಾಪ್ತಿಯಲ್ಲಿ ಖಾಲಿ ಇರುವ 108 ಅಂಗನವಾಡಿ ಕಾರ್ಯಕರ್ತೆಯರ ಹಾಗೂ 302 ಅಂಗನವಾಡಿ ಸಹಾಯಕಿಯರ ಗೌರವಧನ ಆಧಾರಿತ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಆನ್‌ಲೈನ್ ಮೂಲಕ ಮಹಿಳಾ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ದಿನಾಂಕ:24-01-2020 ರಿಂದ 28-02-2020 ರತನಕ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ವಿವರಗಳನ್ನು ಸಂಬಂಧಪಟ್ಟ ತಾಲ್ಲೂಕುಗಳ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಂದ ಕಛೇರಿ ವೇಳೆಯಲ್ಲಿ ಬೆಳಿಗ್ಗೆ 10.00 ರಿಂದ ಸಂಜೆ 5.30ರ ತನಕ ಪಡೆಯಬಹುದು.

ಕ್ರ.ಸಂ	ಸಂಪರ್ಕಿಸಬೇಕಾದವರು	ದೂರವಾಣಿ ಸಂಖ್ಯೆ
1	ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಬೆಂಗಳೂರು ಉತ್ತರ-1	080-28462513
2	ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಬೆಂಗಳೂರು ಉತ್ತರ-2	080-28462513
3	ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಬೆಂಗಳೂರು ಕೇಂದ್ರ	080-25524490
4	ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಬೆಂಗಳೂರು ದಕ್ಷಿಣ	080-26713097
5	ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಬೆಂಗಳೂರು ರಾಜ್ಯ	080-26601917
6	ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಆನೇಕಲ್ ತಾಲ್ಲೂಕು	080-27830962

ಅರ್ಜಿ ಸಲ್ಲಿಸಬೇಕಾದ Website Adress : www.anganwadirecruit.kar.nic.in

ಸೂಚನೆಗಳು:-

1. ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಮೊದಲು ಇದರೊಂದಿಗೆ ಲಗತ್ತಿಸಿರುವ ನೇಮಕಾತಿ ಮಾರ್ಗಸೂಚಿ/ ನಿಬಂಧನೆಗಳನ್ನು ಓದಿಕೊಂಡು ನಂತರ ಅಗತ್ಯ ದಾಖಲೆಗಳೊಂದಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸತಕ್ಕದ್ದು.
2. ಖಾಲಿ ಇವರು ಅಂಗನವಾಡಿ ಕಾರ್ಯಕರ್ತೆಯರ ಹುದ್ದೆಗಳಿಗೆ ಅರ್ಜಿ ಸಲ್ಲಿಸುವವರು ಅರ್ಜಿ ಆಹ್ವಾನಿಸಿರುವ ಸ್ಥಳದವರೇ ಆಗಿರತಕ್ಕದ್ದು. ಬೇರೆ ಸ್ಥಳ, ಬೇರೆ ತಾಲ್ಲೂಕು ಹಾಗೂ ಬೇರೆ ಜಿಲ್ಲೆಯ ಅಭ್ಯರ್ಥಿಗಳು ಮತ್ತು ಪುರುಷ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಾಗಿರುವುದಿಲ್ಲ.
3. ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯರ ಹುದ್ದೆಗಳಿಗೆ ಅರ್ಜಿಗಳನ್ನು ಹಾಗೂ ದಾಖಲಾತಿಗಳನ್ನು ಆನ್‌ಲೈನ್ (Online) ಮೂಲಕ ಮಾತ್ರ ಸಲ್ಲಿಸಬೇಕಾಗಿರುತ್ತಾದೆ.
4. ಸರ್ಕಾರದ ಮಾರ್ಗಸೂಚಿಯ ಪ್ರಕಾರ ಹಾಲಿ ಕಾರ್ಯಕರ್ತೆಯರು ಅರ್ಜಿ ಆಹ್ವಾನಿಸಿರುವ ಅಂಗನವಾಡಿ ಕೇಂದ್ರಗಳಿಗೆ ವರ್ಗಾವಣೆ ಕೋರಿದಲ್ಲಿ ವರ್ಗಾವಣೆಗೆ ಪ್ರಥಮ ಆದ್ಯತೆ ನೀಡಲಾಗುವುದು. ಅಂತಹ ಕೇಂದ್ರಕ್ಕೆ ಅರ್ಜಿ ಆಹ್ವಾನಿಸಲಾಗಿದ್ದರೂ ಹೊಸ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.

downloaded from: www.kpscvaani.com

5. ಹೊಸದಾಗಿ ಮಂಜೂರಾಗಿರುವ ಅಂಗನವಾಡಿ ಕೇಂದ್ರಗಳಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಅನಿವಾರ್ಯ ಕಾರಣದಿಂದಾಗಿ ಸ್ಥಳ ಬದಲಾವಣೆ ಮಾಡುವ ಸಂದರ್ಭಬಂದಲ್ಲಿ ಈಗ ಅರ್ಜಿ ಆಹ್ವಾನಿಸಿರುವ ಅಂಗನವಾಡಿ ಕೇಂದ್ರಗಳಿಗೆ ಸಲ್ಲಿಸಿರುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
6. ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವಲ್ಲಿ ಆಗುವ ತಪ್ಪು ಒಪ್ಪುಗಳಿಗೆ ಅರ್ಜಿದಾರರೇ ಹೊಣೆಗಾರರಾಗಿರುತ್ತಾರೆ. ಹಾಗೂ ಅರ್ಜಿಗಳನ್ನು ಅಪ್‌ಲೋಡ್ ಮಾಡುವಲ್ಲಿನ ತಾಂತ್ರಿಕ ಸಮಸ್ಯೆಗಳನ್ನು ಇಲಾಖೆಯಿಂದ ಪರಿಹರಿಸಲಾಗುವುದಿಲ್ಲ.
7. ಆಯ್ಕೆಯ ವಿವರಗಳನ್ನು ಆನ್‌ಲೈನ್ ಮೂಲಕ ಪ್ರಚಾರ ಪಡಿಸಲಾಗುವುದಿಲ್ಲ. ಫಲಿತಾಂಶಗಳನ್ನು ಸಂಬಂಧಿಸಿದ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿಯ ಸೂಚನಾಫಲಕಗಳಲ್ಲಿ ಪ್ರಚಾರಪಡಿಸಲಾಗುವುದು.

ಅರ್ಜಿಯೊಂದಿಗೆ ಸಲ್ಲಿಸಬೇಕಾದ ದಾಖಲಾತಿಗಳು

1. ಅರ್ಜಿ ನಿಗದಿತ ನಮೂನೆಯಲ್ಲಿ
2. ಜನನ ಪ್ರಮಾಣ ಪತ್ರ/ ಜನ್ಮ ದಿನಾಂಕ ಇರುವ ಎಸ್.ಎಸ್.ಎಲ್.ಸಿ, ಅಂಕಪಟ್ಟಿ
3. ವಿದ್ಯಾರ್ಹತೆ ಬಗ್ಗೆ ಪ್ರಮಾಣ ಪತ್ರ. (ಕಾರ್ಯಕರ್ತೆ ಹುದ್ದೆಗೆ ಎಸ್.ಎಸ್.ಎಲ್.ಸಿ.ಗಿಂತ ಹೆಚ್ಚಿನ ವಿದ್ಯಾರ್ಹತೆ ಹೊಂದಿರುವವರು ಎಸ್.ಎಸ್.ಎಲ್.ಸಿ ತೇರ್ಗಡೆ ಹೊಂದಿರುವ ಅಂಗಪಟ್ಟಿಯನ್ನು ಮಾತ್ರ ಲಗತ್ತಿಸುವುದು.)
4. ತಹಶೀಲ್ದಾರರು/ ಉಪ ತಹಶೀಲ್ದಾರರಿಂದ ಪಡೆದ 1 ವರ್ಷದೊಳಗಿನ ವಾಸಸ್ಥಳ ದೃಢೀಕರಣ ಪತ್ರ.
5. ವಿದ್ಯಾರ್ಹತೆ ಬಗ್ಗೆ ಪ್ರಮಾಣ ಪತ್ರ. (ಸಹಾಯಕಿ ಹುದ್ದೆಗೆ ಕನಿಷ್ಠ 4ನೇ ತರಗತಿ ಉತ್ತೀರ್ಣ ಗರಿಷ್ಠ 9ನೇ ತರಗತಿ ಉತ್ತೀರ್ಣ, ಅಂಕಪಟ್ಟಿಯನ್ನು ಲಗತ್ತಿಸುವುದು.)
6. ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡ ಅಭ್ಯರ್ಥಿಗಳು ಜಾತಿ ಪ್ರಮಾಣ ಪತ್ರ ಲಗತ್ತಿಸುವುದು.
7. ವಿಧವೆಯಾದಲ್ಲಿ ಪತಿಯ ಮರಣ ಪ್ರಮಾಣ ಪತ್ರ (ವಿಧವಾ ವೇತನದ ದೃಢೀಕರಣವನ್ನು ಪರಿಗಣಿಸುವುದಿಲ್ಲ.)
8. ಆತ್ಮಹತ್ಯೆ ಮಾಡಿಕೊಂಡ ರೈತರ ಪತ್ನಿ ಎಂದು ಉಪ ವಿಭಾಗಾಧಿಕಾಗಿಳಿಂದ ಪಡೆದ ಪ್ರಮಾಣ ಪತ್ರ. ಹಾಗೂ ಮರಣ ಪ್ರಮಾಣ ಪತ್ರ ಲಗತ್ತಿಸುವುದು.
9. ಅಂಗವಿಕಲತೆ ಪ್ರಮಾಣ ಪತ್ರ ಕಾರ್ಯಕರ್ತೆ ಹುದ್ದೆಗೆ ಮಾತ್ರ (ದೈಹಿಕ ಅಂಗವಿಕಲತೆ ಶೇ.60 ಮೀರದಂತೆ ಇರುವವರು ಮಾತ್ರ.)
10. ವಿಚ್ಛೇದನ ಪ್ರಮಾಣ ಪತ್ರ (ನ್ಯಾಯಾಲಯದಿಂದ ಪಡೆದಿರಬೇಕು.)
11. ಕರ್ನಾಟ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವತಿಯಿಂದ ನಡೆಸಲ್ಪಟ್ಟ ಮಾಜಿ ದೇವದಾಸಿಯರ ಸಮೀಕ್ಷೆಯ ಪಟ್ಟಿಯಲ್ಲಿರುವ ಮಾಜಿ ದೇವದಾಸಿಯರ ಮಕ್ಕಳು ಎಂಬುದರ ಬಗ್ಗೆ ಮಹಿಳಾ ಅಭಿವೃದ್ಧಿ ನಿಗಮದ ಅಧಿಕಾರಿಗಳಿಂದ ಪ್ರಮಾಣ ಪತ್ರ.
12. ಪರಿತ್ಯಕ್ತೆ ಎಂಬ ಬಗ್ಗೆ ಗ್ರಾಮ ಪಂಚಾಯತ್‌ನಿಂದ ಪಡೆದ ಪ್ರಮಾಣ ಪತ್ರ.
13. ಇಲಾಖೆಯ ಸುಧಾರಣಾ ಸಂಸ್ಥೆ/ ರಾಜ್ಯ ಮಹಿಳಾ ನಿಲಯಗಳ ನಿವಾಸಿ ಎಂಬ ಬಗ್ಗೆ ಮಹಿಳಾ ಮತ್ತು ಮಕ್ಕಳಭಿವೃದ್ಧಿ ಇಲಾಖೆಯ ಅಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ.
14. ಯೋಜನಾ ನಿರಾಶ್ರಿತರೆಂಬ ಬಗ್ಗೆ ತಾಹಶೀಲ್ದಾರರಿಂದ ಪಡೆದ ಪ್ರಮಾಣ ಪತ್ರ.
15. ಸ್ಥಳೀಯ ಸಂಸ್ಥೆಗಳ ಜನಪ್ರತಿನಿಧಿ ಆಗಿದ್ದು ಕಾರ್ಯಕರ್ತೆ/ ಸಹಾಯಕ ಹುದ್ದೆಗೆ ಆಯ್ಕೆಯಾದಲ್ಲಿ ಸದಸ್ಯತ್ವಕ್ಕೆ ರಾಜೀನಾಮೆ ನೀಡಬೇಕಾಗಿರುತ್ತದೆ. ಈ ಬಗ್ಗೆ ಮುಚ್ಚಳಿಕೆ ಸಲ್ಲಿಸುವುದು.
16. ಆನ್‌ಲೈನ್ ಅರ್ಜಿಯೊಂದಿಗೆ ಅಗತ್ಯ ದಾಖಲೆ ಸಲ್ಲಿಸದೇ ಅಪೂರ್ಣ ದಾಖಲಾತಿ ಅಥವಾ ಸ್ಪಷ್ಟವಾಗಿ ಕಾಣದಂತ ದಾಖಲಾತಿಗಳನ್ನು ಸಲ್ಲಿಸಿದ್ದಲ್ಲಿ ಅಂತಹ ಅರ್ಜಿಯನ್ನು ತಿರಸ್ಕರಿಸಲಾಗುವುದು.
17. ಅಂಗನವಾಡಿ ಕಾರ್ಯಕರ್ತೆ/ ಸಹಾಯಕಿಯರ ಹುದ್ದೆಯು ಖಾಯಂ ಹುದ್ದೆಯಲ್ಲ, ಸಂಪೂರ್ಣವಾಗಿ ಗೌರವಧನ ಆಧಾರಿತ ಸೇವೆಯಾಗಿದ್ದು, ಮಾಹೆಯಾನ ಗೌರವಧನ ಕಾರ್ಯಕರ್ತೆಗೆ ರೂ.8000-00, ಮಿನಿ ಅಂಗನವಾಡಿ ಕಾರ್ಯಕರ್ತೆಗೆ ರೂ.4750-00 ಸಹಾಯಕಿಗೆ ರೂ.4000-00.
18. ಆಯ್ಕೆ ಪ್ರಕ್ರಿಯೆಯಲ್ಲಿ ಯಾವುದೇ ಸಮಸ್ಯೆ ಉದ್ಭವಿಸಿದಲ್ಲಿ ಆಯ್ಕೆ ಸಮಿತಿಯ ತೀರ್ಮಾನವೇ ಅಂತಿಮವಾಗಿರುತ್ತದೆ.

ಉಪ ನಿರ್ದೇಶಕರು,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
ಬೆಂಗಳೂರು ನಗರ ಜಿಲ್ಲೆ.

downloaded from: www.kpscvaani.com

Calendar of Events

ವಿವರ	ದಿನಗಳು	ದಿನಾಂಕ
ಆನ್‌ಲೈನಲ್ಲಿ ಅರ್ಜಿ ಸಲ್ಲಿಸಲು ಆರಂಭದ ದಿನಾಂಕ	27-01-2020	-
ಆನ್‌ಲೈನ್ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಸಂಜೆ 5-00 ರವರೆಗೆ	29-02-2020	30 ದಿನ
ಶಿಶು ಅಭಿವೃದ್ಧಿ ಯೋಜನಾಧಿಕಾಗಳಿಂದ ಸ್ವೀಕರಿಸಲಾದ ಅರ್ಜಿಗಳನ್ನು ಆಯ್ಕೆ ಸಮಿತಿಯಲ್ಲಿ ಪರಿಶೀಲನೆ	02-03-2020 ರಿಂದ 09-03-2020	8 ದಿನ
ಅರ್ಹರಾದ ಅಭ್ಯರ್ತಿಗಳ ಪಟ್ಟಿಯನ್ನು ಆಯ್ಕೆ ಸಮಿತಿಯಿಂದ ಅನುಮೋದನೆ ಪಡೆಯುವುದು	10-03-2020 ರಿಂದ 12-03-2020	3 ದಿನ
ಅಭ್ಯರ್ಥಿಗಳಿಂದ ಆಕ್ಷೇಪಣೆ ಸಲ್ಲಿಸುವಿಕೆಗೆ ಕಾಲಾವಕಾಶ	13-03-2020 ರಿಂದ 23-03-2020	8 ದಿನ
ಆಕ್ಷೇಪಣೆ ಬಂದ ಅಭ್ಯರ್ಥಿಗಳ ದಾಖಲಾತಿ ಪರಿಶೀಲನೆ	24-03-2020 ರಿಂದ 27-03-2020	3 ದಿನ
ಪರಿಶೀಲನೆ ನಂತರ ಆಯ್ಕೆ ಸಮಿತಿಯ ಸಭೆ ನೆಡೆಸಿ ಅಂತಿಮ ಪಟ್ಟಿಗೆ ಅನುಮೋದನೆ ಪಡೆಯುವುದು.	30-03-2020 ರಿಂದ 02-04-2020	4 ದಿನ

ಉಪ ನಿರ್ದೇಶಕರು,
ಮಹಿಳಾ ಮತ್ತು ಮಕ್ಕಳ ಅಬಿವೃದ್ಧಿ ಇಲಾಖೆ,
ಬೆಂಗಳೂರು ನಗರ ಜಿಲ್ಲೆ.

downloaded from: www.kpscvaani.com